ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸಮಗ್ರ ಅಭಿವೃದ್ಧಿ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):-

50 (67) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಸಮಗ್ರ ಅಭಿವೃದ್ಧಿ ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಉತ್ತರ ಕರ್ನಾಟಕ, ಹೈದರಾಬಾದ್ ಕರ್ನಾಟಕ ಪ್ರದೇಶಗಳಿಗೆ ಇಲಾಖೆಯಿಂದ ಕಳೆದ ಮೂರು ವರ್ಷಗಳಿಂದ ಮಂಜೂರಾದ ಅನುದಾನವೆಷ್ಟು ;

(ಇ) ರಾಜ್ಯದ ವಿವಿಧ ಪ್ರದೇಶಗಳಿಗೆ ಕಳೆದ ಮೂರು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯಿಂದ ದಲಿತರ ಕ್ಷೇಮಾಭಿವೃದ್ಧಿಗೆ ಬಿಡುಗಡೆಯಾದ ಹಣವೆಷ್ಟು ;

(ಈ) ಅಂಬೇಡ್ಕರ್ ವಸತಿ ಶಾಲೆಗಳ ನಿರ್ವಹಣೆ ಹಾಗೂ ಸದ್ಯದ ಸ್ಥಿತಿಗತಿಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?